# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:-** ಶ್ರೀ ಶರಣಬಸವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂಧನೂರು, ರಾಯಚೂರು ಜಿಲ್ಲೆ ಇವರ ವಿರುದ್ಧದ ಶಿಸ್ತುಕ್ರಮ – ಅಂತಿಮ ಆದೇಶ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 217 ವಿಸೇಬಿ 2012 ದಿನಾಂಕ: 15-01-2013.

2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಪತ್ರ ಸಂಖ್ಯೆ: ಲೋಕ/ಎಆರ್‌ಇ-5/ಇಎನ್‌ಕ್ಯೂ-42/ 2013 ದಿನಾಂಕ: 08-10-2015.

3) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 261 ವಿಸೇಬಿ 2015 ದಿ:28-12-2015.

------

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ಶ್ರೀ ಭೀಮಣ್ಣ ತಂ. ಚಿದಾನಂದಪ್ಪ ಸಾ॥ ಮಾಟೂರು, ಸಿಂಧನೂರು ತಾಲ್ಲೂಕು ಇವರು ಬಪ್ಪೂರು ಗ್ರಾ.ಪಂ. ವ್ಯಾಪ್ತಿಯ ಮಾಟೂರು ಗ್ರಾಮದಲ್ಲಿ ಕುಡಿಯುವ ನೀರಿನ ಕೆರೆ ನಿರ್ಮಾಣ ಕಾಮಗಾರಿಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಶ್ರೀ ಶರಣಬಸವ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಸಿಂಧನೂರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಪ್ಪೂರು ಗ್ರಾ.ಪಂ. ಇವರುಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರಿನ ಪ್ರತಿಯನ್ನು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಸಿಂಧನೂರು ಇವರಿಗೆ ಕಳುಹಿಸಿ ಈ ದೂರಿನ ಬಗ್ಗೆ ತನಿಖೆಯನ್ನು ಕೈಗೊಂಡು ತಮ್ಮ ವಿವರವಾದ ವರದಿಯನ್ನು ದಿ: 08-05-2012ರ ಒಳಗಾಗಿ ಲೋಕಾಯುಕ್ತ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿತ್ತು. ತನಿಖಾ ವರದಿ ಸಲ್ಲಿಸಲು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಸಿಂಧನೂರು ರವರು ಒಂದು ತಿಂಗಳ ಕಾಲಾವಕಾಶವನ್ನು ದಿ: 05-03-2012ರ ಪತ್ರದಲ್ಲಿ ಕೋರಿರುತ್ತಾರೆ. ಈ ಅಧಿಕಾರಿ ನಿಗದಿತ ಅವಧಿಯೊಳಗೆ ವರದಿ ಸಲ್ಲಿಸದೇ ಇರುವುದರಿಂದ ದಿನಾಂಕ: 02-04-2012ರ ನೆನಪೋಲೆಯನ್ನು ಕಳುಹಿಸಿ ದಿನಾಂಕ: 13-04-2012ರ ಒಳಗಾಗಿ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಆದರೂ ವರದಿ ಸಲ್ಲಿಸಿರುವುದಿಲ್ಲ. ಈ ಅಂಶವನ್ನು ಗಂಭೀರವಾಗಿ ಪರಿಗಣಿಸಿ ಇವರ ವಿರುದ್ಧ ಮಾಡಲಾದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಜರುಗಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತ ಇವರಿಗೆ ವಹಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರು ಶ್ರೀ ಶರಣಬಸವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಲಿಂಗಸಗೂರು ಇವರ ವಿರುದ್ಧ ಮಾಡಿರುವ ಆರೋಪಗಳು ಸಾಬೀತಾಗಿರುತ್ತದೆಂದು ವರದಿ ನೀಡುತ್ತಾ, ಅವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(iii)ರ ಅನುಸಾರ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆ ಹಿಡಿಯುವ ದಂಡನೆ" ವಿಧಿಸಬಹುದೆಂದು ಶಿಫಾರಸ್ಸನ್ನು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಮಾನ್ಯ ಉಪಲೋಕಾಯುಕ್ತರು ಸಲ್ಲಿಸಿರುವ ವರದಿಯಲ್ಲಿ ಆಪಾದಿತ ಅಧಿಕಾರಿಯ ವಿರುದ್ಧದ ಆರೋಪಗಳು ಸಾಬೀತಾಗಿರುತ್ತವೆ ಎಂದು ನೀಡಿರುವ ವರದಿಯನ್ನಾಧರಿಸಿ ಶ್ರೀ ಶರಣಬಸವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸಗೂರು ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಇವರ ಮೂಲಕ ದಿನಾಂಕ: 03-02-2016 ರಂದು ಎರಡನೇ ಕಾರಣ ಕೇಳುವ ನೋಟಿಸನ್ನು ಜಾರಿಗೊಳಿಸಲಾಗಿದೆ. ಸದರಿ ನೋಟಿಸಿಗೆ ಆಪಾದಿತ ಅಧಿಕಾರಿಗೆ ಲಿಖಿತ ಹೇಳಿಕೆಯನ್ನು ಸಲ್ಲಿಸಲು ದಿನಾಂಕ: 26-03-2016 ರಂದು ನೆನಪೋಲೆಯನ್ನು ಸಹ ಕಳುಹಿಸಲಾಗಿರುತ್ತದೆ. ಆದಾಗ್ಯೂ ಅವರಿಂದ ಲಿಖಿತ ಹೇಳಿಕೆ ಸ್ವೀಕೃತವಾಗಿರುವುದಿಲ್ಲ.

ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ ಇವರ ವರದಿ ಅನುಸಾರ ಶ್ರೀ ಶರಣಬಸವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಿಂಧನೂರ ಇವರಿಗೆ ಮೇಲೆ ಕ್ರಮ ಸಂಖ್ಯೆ(3) ರಲ್ಲಿ ಓದಲಾದ ದಿನಾಂಕ: 28-12-2015ರ 2ನೇ ಕಾರಣ ಕೇಳುವ ನೋಟೀಸನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರ ಇವರ ಮುಖಾಂತರ ಜಾರಿಮಾಡಲಾಗಿತ್ತು. ಸದರಿಯವರು 2ನೇ ಕಾರಣ ಕೇಳುವ ನೋಟೀಸನ್ನು ದಿನಾಂಕ: 03-02-2016 ರಂದು ಪಡೆದು ಸ್ವೀಕೃತಿ ನೀಡಿರುತ್ತಾರೆ. ಆದರೆ ಶ್ರೀ ಶರಣಬಸವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಸಿಂಧನೂರು ಇವರು ಕಾರಣ ಕೇಳುವ ನೋಟಿಸಿಗೆ ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲವಾದ್ದರಿಂದ ಅವರ ಹೇಳಿಕೆ ಏನು ಇಲ್ಲವೆಂದು ಭಾವಿಸಿ, ಮೇಲಿನ ಕಂಡಿಕೆಯಲ್ಲಿ ಪ್ರಸ್ತಾಪಿಸಿರುವ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿ ಅಧಿಕಾರಿಯ ಕರ್ತವ್ಯ ಲೋಪಕ್ಕೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 261 ವಿಸೇಬಿ 2015 ಬೆಂಗಳೂರು ದಿನಾಂಕ:10-11-2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಶರಣಬಸವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಸಿಂಧನೂರು, ರಾಯಚೂರು ಜಿಲ್ಲೆ ಇವರ ವಿರುದ್ಧದ ಆರೋಪಗಳಿಗೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(iii) ರಡಿ ಪ್ರದತ್ತವಾದ ಅಧಿಕಾರದನ್ವಯ "ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ (With Cumulative Effective) ತಡೆಹಿಡಿಯುವ ದಂಡನೆ" ವಿಧಿಸಿ, ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:
1. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.

2. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು.
3. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಇವರ ಮುಖಾಂತರ).

ಪ್ರತಿಯನ್ನು ಮಾಹಿತಿಗಾಗಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.